Akashvani: Bangalore
National Bulletin In Kannada
09.04.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

09.04.2026: 13.10hrs

********

**ಮುಖ್ಯಾಂಶಗಳು :**

1. ಅಸ್ಸಾಂ, ಕೇರಳಂ, ಪುದುಚೇರಿ ವಿಧಾನಸಭಾ ಚುನಾವಣೆ ; ಬಿರುಸಿನ ಮತದಾನ ಪ್ರಗತಿಯಲ್ಲಿ
2. ಕರ್ನಾಟಕದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣದಲ್ಲಿ ಉತ್ಸಾಹದಿಂದ ಹಕ್ಕು ಚಲಾಯಿಸುತ್ತಿರುವ ಮತದಾರರು
3. ಶಾಸನ ಸಂಸ್ಥೆಗಳಲ್ಲಿ ಮಹಿಳಾ ಮೀಸಲು ಒದಗಿಸಲು ಸಕಾಲ ; ಇದರಿಂದ ಪ್ರಜಾಪ್ರಭುತ್ವ ಮತ್ತಷ್ಟು ಸಕ್ರಿಯ- ಪ್ರಧಾನಿ ನರೇಂದ್ರ ಮೋದಿ
4. ಭಾರತ-ಅಮೆರಿಕ ನಡುವಿನ ದ್ವಿಪಕ್ಷೀಯ ವ್ಯಾಪಾರದಲ್ಲಿ ಕ್ಷಿಪ್ರ ಪ್ರಗತಿ - ಸಚಿವ ಪಿಯೂಷ್ ಗೋಯಲ್
5. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಕೋಲ್ಕತ್ತಾ ನೈಟ್ ರೈಡರ್ಸ್-ಲಖನೌ ಸೂಪರ್ ಜೈಂಟ್ಸ್ ಹಣಾಹಣಿ

*********

ಅಸ್ಸಾಂ, ಕೇರಳಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಯ ಮತದಾನ ಪ್ರಗತಿಯಲ್ಲಿದೆ. ಅಸ್ಸಾಂನ ಎಲ್ಲಾ ೧೨೬ ಸ್ಥಾನ, ಕೇರಳಂನ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯುತ್ತಿದೆ. ಬೆಳಿಗ್ಗೆ ೭ ಗಂಟೆಗೆ ಆರಂಭವಾಗಿರುವ ಮತದಾನ ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಮತದಾನ ಖಾತ್ರಿಪಡಿಸಿಕೊಳ್ಳಲು ಚುನಾವಣಾ ಆಯೋಗವು ಸಕಲ ವ್ಯವಸ್ಥೆ ಕೈಗೊಂಡಿದೆ.ಕೇರಳಂನಲ್ಲಿ, ೧೪೦ ವಿಧಾನಸಭಾ ಸ್ಥಾನಗಳಿಗೆ ಒಟ್ಟು ೮೮೩ ಅಭ್ಯರ್ಥಿಗಳು

ಕಣದಲ್ಲಿದ್ದಾರೆ. ಸಣ್ಣ ಪುಟ್ಟ ಘಟನೆಗಳನ್ನು ಹೊರತುಪಡಿಸಿದರೆ ಮತದಾನ ಶಾಂತಿಯುತವಾಗಿ ನಡೆದಿದೆ. ಒಟ್ಟು ೨ ಕೋಟಿ ೭೧ ಲಕ್ಷ ಮತದಾರರನ್ನು ಹೊಂದಿದ್ದು, ಅವರಿಗಾಗಿ ಸುಮಾರು ೩೦ ಸಾವಿರದ ೪೯೫ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಪ್ರತಿಪಕ್ಷದ ನಾಯಕ ವಿ.ಡಿ.ಸತೀಸನ್, ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್, ತಮ್ಮ ಹಕ್ಕು ಚಲಾಯಿಸಿದರು. ಪುದುಚೇರಿಯಲ್ಲಿ, ೨೯೪ ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದು, ೧ ಸಾವಿರದ ೯೯ ಮತಗಟ್ಟೆಗಳಲ್ಲಿ ೨೦೯ ಮತಗಟ್ಟೆಗಳನ್ನು ಸೂಕ್ಷ್ಮ ಮತ್ತು ಐದು ನಿರ್ಣಾಯಕ ಎಂದು ಗುರುತಿಸಲಾಗಿದೆ. ಅಸ್ಸಾಂನಲ್ಲಿ, ೬೬೩ ಪುರುಷರು ಮತ್ತು ೫೯ ಮಹಿಳೆಯರು ಸೇರಿ ೭೨೨ ಅಭ್ಯರ್ಥಿಗಳು ೧೨೬ ಸ್ಥಾನಗಳಿಗೆ ಸ್ಪರ್ಧಿಸಿದ್ದಾರೆ. ೨.೫ ಕೋಟಿಗೂ ಅಧಿಕ ಮತದಾರರಿದ್ದು, ೧೮-೧೯ ವರ್ಷ ವಯಸ್ಸಿನ ೬.೪ ಲಕ್ಷಕ್ಕೂ ಅಧಿಕ ಯುವ ಮತದಾರರು ಮೊದಲ ಬಾರಿಗೆ ತಮ್ಮ ಹಕ್ಕು ಚಲಾಯಿಸಲಿದ್ದಾರೆ. ರಾಜ್ಯಾದ್ಯಂತ ಒಟ್ಟು ೩೧ ಸಾವಿರ ೪೯೦ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇವುಗಳಲ್ಲಿ ೪,೦೨೧ ಮತಗಟ್ಟೆಗಳನ್ನು ಸಂಪೂರ್ಣವಾಗಿ ಮಹಿಳೆಯರೇ ನಿರ್ವಹಿಸಲಿದ್ದಾರೆ. ಈ ಮಧ್ಯೆ, ತಮಿಳುನಾಡಿನಲ್ಲಿ ಒಂದೇ ಹಂತದ ಮತ್ತು ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆ ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ.  ನಾಲ್ಕು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಮೇ ೪ ರಂದು ನಡೆಯಲಿದೆ.ಪ್ರಧಾನಿ ನರೇಂದ್ರ ಮೋದಿ, ದೊಡ್ಡ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಅಸ್ಸಾಂ, ಕೇರಳಂ ಹಾಗೂ ಪುದುಚೇರಿಯ ಮತದಾರರಿಗೆ ಮನವಿ ಮಾಡಿದ್ದಾರೆ. ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅಸ್ಸಾಂನ ಜನತೆ ದೊಡ್ಡ ಸಂಖ್ಯೆಯಲ್ಲಿ ಮತದಾನ ಮಾಡಬೇಕು. ಕೇರಳಂನ ಯುವಕರು ಹಾಗೂ ಮಹಿಳೆರಯರು ಅತಿ ಉತ್ಸಾಹದಿಂದ ಮತದಾನದಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವ ಹಬ್ಬವನ್ನು ಆಚರಿಸಬೇಕು ಮತ್ತು ಪುದುಚೇರಿಯಲ್ಲಿ ಯುವಜನತೆ ಹಾಗೂ ಮಹಿಳೆಯರು ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಗೊಳಿಸಬೇಕು ಎಂದು ಕರೆ ನೀಡಿದ್ದಾರೆ.ಚುನಾವಣಾ ಆಯೋಗದ ಇತ್ತೀಚಿನ ಮಾಹಿತಿಯಂತೆ ಬೆಳಗ್ಗೆ ೧೧ ಗಂಟೆಯವರೆಗೆ ಅಸ್ಸಾಂನಲ್ಲಿ ಶೇಕಡ ೩೮.೯೨ ಕೇರಳಂದಲ್ಲಿ ೩೩.೨೮ ಮತ್ತು ಪುದುಚೇರಿಯಲ್ಲಿ ೩೭.೦೬ ರಷ್ಟು ಮತದಾನವಾಗಿದೆ.

********

ಕರ್ನಾಟಕದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರಗಳ ಉಪ ಚುನಾವಣೆಯ ಮತದಾನ ಪ್ರಗತಿಯಲ್ಲಿದ್ದು, ಮತದಾರರು ಅತ್ಯುತ್ಸಾಹದಿಂದ ತಮ್ಮ ಹಕ್ಕು ಚಲಾಯಿಸುತ್ತಿದ್ದಾರೆ. ಬಾಗಲಕೋಟೆಯ ಕಣದಲ್ಲಿ ೯ ಅಭ್ಯರ್ಥಿಗಳಿದ್ದರೆ, ದಾವಣಗೆರೆ ದಕ್ಷಿಣದಲ್ಲಿ ಒಟ್ಟು ೨೫ ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ. ಎರಡೂ ಕ್ಷೇತ್ರಗಳಲ್ಲಿ ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ನೇರ ಸ್ಪರ್ಧೆ ಇದೆ. ಚುನಾವಣಾ ಆಯೋಗದ ಪ್ರಾಥಮಿಕ ಮಾಹಿತಿ ಅನ್ವಯ ಬೆಳಗ್ಗೆ ೧೧ ಗಂಟೆಯವರೆಗೆ ಬಾಗಲಕೋಟೆಯಲ್ಲಿ ಶೇಕಡ ೨೭.೮೩ ರಷ್ಟು ಮತ್ತು ದಾವಣಗೆರೆ ದಕ್ಷಿಣದಲ್ಲಿ ಶೇಕಡ ೨೨.೦೧ ರಷ್ಟು ಮತದಾನವಾಗಿದೆ. ಮತದಾನ ಎರಡೂ ಕ್ಷೇತ್ರಗಳಲ್ಲಿ ಶಾಂತಿಯುತವಾಗಿ ಸಾಗಿದೆ.ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಮತದಾನದ ಮಾಹಿತಿಯನ್ನು ನಮ್ಮ ಜಿಲ್ಲಾ ಪ್ರತಿನಿಧಿ ಕೆ.ಎಸ್.ಚನ್ನಬಸಪ್ಪ ಒದಗಿಸಿದ್ದಾರೆ.

ಧ್ವನಿ : ಕೆ.ಎಸ್.ಚನ್ನಬಸಪ್ಪ ( ೩೮ ಸೆಕೆಂಡ್‌ಗಳು)

********

ಶಾಸನ ಸಂಸ್ಥೆಗಳನ್ನು ಮಹಿಳಾ ಮೀಸಲಾತಿ ಒದಗಿಸಲು ಇದು ಸಕಾಲ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ಅವರು, ಒಪೆಡ್ ಹಾಗೂ ಸರಣಿ ಪೋಸ್ಟ್‌ಗಳಲ್ಲಿ ತಮ್ಮ ಚಿಂತನೆಗಳನ್ನು ಹಂಚಿಕೊಂಡಿದ್ದು, ಮಹಿಳೆಯರಿಗೆ ಮೀಸಲು ಒದಗಿಸುವುದು ಪ್ರಜಾಪ್ರಭುತ್ವವನ್ನು ಮತ್ತಷ್ಟು ಸಕ್ರಿಯಗೊಳಿಸುತ್ತದೆ. ಒಂದು ವೇಳೆ ಈ ಮೀಸಲಾತಿ ಜಾರಿಗೊಳಿಸುವುದು ವಿಳಂಬವಾದರೆ ಅದು ದುರದೃಷ್ಟಕರ ಎಂದು ಹೇಳಿದ್ದಾರೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೨ ಸೆಕೆಂಡ್‌ಗಳು)

ಶಾಸನ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲು ಒದಗಿಸುವುದು ಭಾರತದಾದ್ಯಂತ ಇರುವ ಕೋಟ್ಯಾಂತರ ಮಹಿಳೆಯರ ಆಶೋತ್ತರಗಳ ಪ್ರತಿಬಿಂಬವಾಗಿದೆ. ಮಹಿಳೆ ಪ್ರಗತಿ ಸಾಧಿಸಿದರೆ ಸಮಾಜವೂ ಪ್ರಗತಿ ಹೊಂದುತ್ತದೆ ಎಂಬ ತತ್ವವನ್ನು ಪುನರ್ ಪ್ರತಿಪಾದಿಸುತ್ತದೆ ಎಂದು ಪ್ರಧಾನಿ ತಿಳಿಸಿದ್ದಾರೆ. ವಿಜ್ಞಾನದಿಂದ ತಂತ್ರಜ್ಞಾನದವರೆಗೆ, ಉದ್ಯಮದಿಂದ ಕ್ರೀಡೆಯವರೆಗೆ ಸಶಸ್ತ್ರ ಪಡೆಗಳಿಂದ ಸಂಗೀತ ಕಲೆಯವರೆಗೆ ಪ್ರತಿಯೊಂದು ವಲಯದಲ್ಲೂ ಮಹಿಳೆಯರು ಮುಂಚೂಣಿಯಲ್ಲಿ ನಿಂತು ಗಣನೀಯ ಸಾಧನೆ ಮಾಡುತ್ತಿದ್ದಾರೆ. ಮಹಿಳೆಯರು ನಿರ್ಧಾರ

ಕೈಗೊಳ್ಳುವುದು ಮತ್ತು ಆಡಳಿತದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಿದರೆ ಅವರ ಅನುಭವ ಹಾಗೂ ಒಳನೋಟಗಳಿಂದ ಆಡಳಿತದ ಗುಣಮಟ್ಟ ಸುಧಾರಣೆಯಾಗಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

********

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ, ಇಂದು ಪಶ್ಚಿಮ ಬಂಗಾಳದ ಬಿರ್‌ಭುಮ್ ಜಿಲ್ಲೆಯ ಹಲ್ದಿಯಾ, ಅಸನ್ಸೊಲ್ ಮತ್ತು ಸೂರಿಗಳಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮತ್ತೊಬ್ಬ ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೂಗ್ಲಿ ಜಿಲ್ಲೆಯ ಸಿಂಗೂರ್‌ನಲ್ಲಿ ರೈತರ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು, ದಕ್ಷಿಣ ದಿನಜ್‌ಪುರದ ಚಾಕುಲಿಯದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ, ದಕ್ಷಿಣ ೨೪ ಪರಗಣ ಜಿಲ್ಲೆಯ ಹಲವೆಡೆ ಸಾರ್ವಜನಿಕ ಸಭೆಗಳನ್ನು ನಡೆಸಿ ಮತಯಾಚನೆ ಮಾಡಲಿದ್ದಾರೆ.

********

ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತದ ಪ್ರಗತಿ ಅಂದಾಜನ್ನು ವಿಶ್ವಬ್ಯಾಂಕ್ ಶೇಕಡ ೬.೩ ರಿಂದ ೬.೬ಕ್ಕೆ ಹೆಚ್ಚಳ ಮಾಡಿದೆ. ಮುಕ್ತ ವ್ಯಾಪಾರ ಒಪ್ಪಂದಗಳು ಹಾಗೂ ಸದೃಢ ದೇಶೀಯ ಬೇಡಿಕೆ ಹೆಚ್ಚಳ ಹಿನ್ನೆಲೆಯಲ್ಲಿ ಪ್ರಗತಿಯ ಅಂದಾಜನ್ನು ಪರಿಷ್ಕರಿಸಲಾಗಿದೆ. ಭಾರತ ದಕ್ಷಿಣ ಏಷ್ಯಾದಲ್ಲೇ ಪ್ರಗತಿಯ ಇಂಜಿನ್ ಆಗಿ ಮುಂದುವರಿಯಲಿದೆ ಎಂದು ವಿಶ್ವಬ್ಯಾಂಕ್ ನಿರೀಕ್ಷಿಸಿದೆ. ಭಾರತದಲ್ಲಿ ೨೦೨೫ನೇ ಹಣಕಾಸು ವರ್ಷದಲ್ಲಿ ಶೇಕಡ ೭.೧ ಹಾಗೂ ೨೦೨೬ನೇ ಹಣಕಾಸು ವರ್ಷದಲಿ ೭.೬ರಷ್ಟು ಆರ್ಥಿಕ ಪ್ರಗತಿ ನಿರೀಕ್ಷಿಸಲಾಗಿದೆ.

********

ಭಾರತ ಮತ್ತು ಅಮೆರಿಕ ವಿಶ್ವದ ಅತ್ಯಂತ ಪರಿಣಾಮಕಾರಿ ಆರ್ಥಿಕ ಪಾಲುದಾರಿಕೆಯನ್ನು ಹಂಚಿಕೊಂಡಿದ್ದು, ಅದು ಪ್ರಜಾಪ್ರಭುತ್ವದ ಮೌಲ್ಯಗಳ ಸಮಾನ ಹಂಚಿಕೆಯೊಂದಿಗೆ ಬೆಸೆದುಕೊಂಡಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್

ಹೇಳಿದ್ದಾರೆ. ಅವರು, ಭಾರತ-ಅಮೆರಿಕ ವ್ಯಾಪಾರ ಉತ್ತೇಜನ ಪೋರ್ಟಲ್, ಉದ್ಘಾಟನೆ ವೇಳೆ ಮಾತನಾಡಿ, ಭಾರತ-ಅಮೆರಿಕ ಪಾಲುದಾರಿಕೆ ಅತ್ಯಂತ ವಿಶೇಷವಾಗಿದೆ ಮತ್ತು ದ್ವಿಪಕ್ಷೀಯ ವ್ಯಾಪಾರ ಅತ್ಯಂತ ಕ್ಷಿಪ್ರವಾಗಿ ಬದಲಾಗುತ್ತಿದೆ ಎಂದು ತಿಳಿಸಿದ್ದಾರೆ. ಉಭಯ ದೇಶಗಳು ದ್ವಿಪಕ್ಷೀಯ ವ್ಯಾಪಾರವನ್ನು ೫೦೦ ಮಿಲಿಯನ್ ಡಾಲರ್‌ಗೆ ಹೆಚ್ಚಿಸುವ ಗುರಿಯನ್ನು ಹೊಂದಿದ್ದು, ಆ ನಿಟ್ಟಿನಲ್ಲಿ ತ್ವರಿತ ಪ್ರಗತಿಯನ್ನು ಕಾಣುತ್ತಿದ್ದೇವೆ ಎಂದು ಗೋಯಲ್ ಹೇಳಿದರು.

********

ಇರಾನ್ ವಿರುದ್ಧ ಅಮೆರಿಕ ನಡೆಸುತ್ತಿರುವ ಸಂಘರ್ಷವನ್ನು ಬೆಂಬಲಿಸದ ನ್ಯಾಟೊ ವಿರುದ್ಧ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ವಾಗ್ದಾಳಿ ನಡೆಸಿದ್ದಾರೆ. ಶ್ವೇತ ಭವನದಲ್ಲಿ ನಡೆದ ಖಾಸಗಿ ಸಭೆಯಲ್ಲಿ ನ್ಯಾಟೊ ಕಾರ್ಯದರ್ಶಿ ಮಾರ್ಕ್ ರುಟ್ಟೆ, ಅವರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ ಅಮೆರಿಕಕ್ಕೆ ಅಗತ್ಯ ಬಿದ್ದಾಗ ನ್ಯಾಟೊ ಬೆಂಬಲಿಸಲಿಲ್ಲ ಎಂದು ಹೇಳಿದ್ದಾರೆ.

********

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿಂದು ಕೋಲ್ಕತ್ತಾ ನೈಟ್ ರೈಡರ್ಸ್ ತಂಡವು, ಲಖನೌ ಸೂಪರ್ ಜೈಂಟ್ಸ್ ತಂಡವನ್ನು ಎದುರಿಸಲಿದೆ. ಪಂದ್ಯವು ಸಂಜೆ ೭:೩೦ ಕ್ಕೆ ಆರಂಭವಾಗಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡವು ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಒಂದು ರನ್‌ನಿಂದ ರೋಚಕ ಗೆಲುವು ಸಾಧಿಸಿತು.

********

ಚೀನಾದ ನಿಂಗ್ಬೊನಲ್ಲಿ ನಡೆಯುತ್ತಿರುವ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಆಯುಷ್ ಶೆಟ್ಟಿ ತೈವಾನ್‌ನ ಚಿ ಯು ಯೆನ್ ವಿರುದ್ಧ ೨೧-೧೬, ೨೧-೧೨ ನೇರ ಸೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿ, ಪ್ರೀ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಇನ್ನು ಮಹಿಳಾ ಸಿಂಗಲ್ಸ್ ವಿಭಾಗದ ೧೬ರ ಸುತ್ತಿನ ಹಣಾಹಣಿಯಲ್ಲಿ ಭಾರತದ ಪಿ.ವಿ. ಸಿಂಧು ಪರಾಭವಗೊಂಡಿದ್ದಾರೆ.

****END****